# Bangalore
# Regional News
# 19.02.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಅನ್ನಭಾಗ್ಯ ಯೋಜನೆಯಡಿ ಇದೇ ತಿಂಗಳಿಂದ ಹಣದ ಬದಲು ಅಕ್ಕಿ ನೀಡಲು ಸರ್ಕಾರ ತೀರ್ಮಾನ
2. ಕೇಂದ್ರ ಜಲಶಕ್ತಿ ಸಚಿವರೊಂದಿಗೆ ರಾಜ್ಯದ ನೀರಾವರಿ ಯೋಜನೆಗಳ ಬಗ್ಗ ಚರ್ಚೆ – ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್
3. ಆರ್ಥಿಕ ದುಸ್ಥಿತಿಯಿಂದ ರಾಜ್ಯ ಸರ್ಕಾರ ದಿವಾಳಿ – ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪ
4. ಕವಿ ಚಕ್ರವರ್ತಿ ರನ್ನ ವೈಭವದ 'ರನ್ನರಥ'ಕ್ಕೆ ಬೆಂಗಳೂರಿನಲ್ಲಿ ಅಬಕಾರಿ ಸಚಿವ ಆರ್.ಬಿ ತಿಮ್ಮಾಪೂರ ಚಾಲನೆ

***************

ಅನ್ನ ಭಾಗ್ಯ ಯೋಜನೆಯಲ್ಲಿ ಹಣದ ಬದಲು ಅಕ್ಕಿ ನೀಡಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಆಹಾರ ಸಚಿವ ಕೆ.ಎಚ್.ಮುನಿಯಪ್ಪ, ಅನ್ನಭಾಗ್ಯ ಯೋಜನೆಯಡಿ ಪ್ರತಿ ಫಲಾನುಭವಿಗೆ 10 ಕೆ.ಜಿ. ಅಕ್ಕಿ ಘೋಷಣೆ ಮಾಡಲಾಗಿತ್ತು. ಕೇಂದ್ರದಿಂದ ಅಕ್ಕಿ ಲಭ್ಯವಾಗದ ಕಾರಣ 5 ಕೆ.ಜಿ ಅಕ್ಕಿಯ ಜೊತೆಗೆ 173 ರೂಪಾಯಿ ನಗದು ವರ್ಗಾವಣೆ ಮಾಡಲಾಗುತಿತ್ತು. ಇದೀಗ ಕೇಂದ್ರ ಸರ್ಕಾರ 22 ರೂಪಾಯಿ 50 ಪೈಸೆ ದರದಲ್ಲಿ ಅಕ್ಕಿ ಸರಬರಾಜು ಮಾಡಲು ಒಪ್ಪಿಗೆ ಸೂಚಿಸಿದೆ.

ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಒಎಂಎಸ್ಎಸ್ ಯೋಜನೆಯಡಿ ಅಕ್ಕಿ ಖರೀದಿಸಿ, ಈ ತಿಂಗಳಿನಿಂದಲೇ ಗ್ರಾಹಕರಿಗೆ ಅಕ್ಕಿ ವಿತರಿಸಲು ತೀರ್ಮಾನಿಸಲಾಗಿದೆ ಎಂದು ಸಚಿವ ಮುನಿಯಪ್ಪ ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಕೆ.ಎಚ್.ಮುನಿಯಪ್ಪ

ಕೇಂದ್ರ ಸರ್ಕಾರದ ಅಂತ್ಯೋದಯ ಅನ್ನ ಯೋಜನೆಯಲ್ಲಿ 10 ಲಕ್ಷದ 80 ಸಾವಿರದ 233 ಮಂದಿ ಪಡಿತರ ಚೀಟಿ ಹೊಂದಿದ್ದು, 1 ಕೋಟಿ 1 ಲಕ್ಷದ 3 ಸಾವಿರದ 420 ಬಿಪಿಎಲ್ ಕಾರ್ಡ್‌ಗಳಿವೆ.

ರಾಜ್ಯ ಸರ್ಕಾರದ ಒಟ್ಟು 16 ಲಕ್ಷದ 62 ಸಾವಿರದ 905 ಮಂದಿ ಅಂತ್ಯೋದಯ ಅನ್ನ ಯೋಜನೆ, ಬಿಪಿಎಲ್ ಕಾರ್ಡ್ ಹೊಂದಿದ್ದಾರೆ. ರಾಜ್ಯದಲ್ಲಿ ಒಟ್ಟಾರೆ 1 ಕೋಟಿ 53 ಲಕ್ಷದ 76 ಸಾವಿರದ 473 ಮಂದಿ ಬಿಪಿಎಲ್ ಕಾರ್ಡ್ ಹೊಂದಿದ್ದಾರೆ ಎಂದು ಸಚಿವ ಮುನಿಯಪ್ಪ ಮಾಹಿತಿ ನೀಡಿದ್ದಾರೆ.

***************

'ಕೇಂದ್ರ ಜಲಶಕ್ತಿ ಸಚಿವರು ಇದೇ 25ರಂದು ನವದೆಹಲಿಯಲ್ಲಿ ಭೇಟಿಗೆ ಕಲಾವಕಾಶ ನೀಡಿದ್ದು, ರಾಜ್ಯದ ನೀರಾವರಿ ಯೋಜನೆಗಳ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ರಾಜಸ್ಥಾನದ ಉದಯಪುರದಲ್ಲಿ ಮಾತನಾಡಿದ ಅವರು, ರಾಜ್ಯದ ಯೋಜನೆಗಳಿಗೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡುವ ವಿಶ್ವಾಸವಿದೆ' ಎಂದು ಹೇಳಿದ್ದಾರೆ.

"ಕೇಂದ್ರ ಸಚಿವರನ್ನು ಭೇಟಿ ಮಾಡಿ, ಮಹದಾಯಿ, ಮೇಕೆದಾಟು, ಕೃಷ್ಣಾ ಮೇಲ್ದಂಡೆ ಯೋಜನೆಗಳ ಬಗ್ಗೆ ಚರ್ಚೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ತುಂಗಭದ್ರಾ ನದಿಯ 30 ಟಿಎಂಸಿ ನೀರನ್ನು ಉಳಿಸಿ, ಸದ್ಬಳಕೆ ಮಾಡಿಕೊಳ್ಳಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಸಮ್ಮೇಳನದಲ್ಲಿ ಆಂಧ್ರಪ್ರದೇಶ ಹಾಗೂ ತೆಲಂಗಾಣದ ಸಚಿವರ ಜೊತೆ ಚರ್ಚೆ ನಡೆಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

***************

ಬೆಂಗಳೂರಿನಲ್ಲಿ ನಡೆದ ಏರ್ ಶೋ ಅತ್ಯಂತ ಯಶಸ್ವಿಯಾದ ಹಿನ್ನೆಲೆಯಲ್ಲಿ ಭಾರತೀಯ ವಾಯು ಸೇನೆಯ ಹಿರಿಯ ಅಧಿಕಾರಿಗಳು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿ ಅಭಿನಂದನೆ ಸಲ್ಲಿಸಿದ್ದಾರೆ.

ಬೆಂಗಳೂರಿನ ಯಲಹಂಕ ವಾಯುನೆಲೆಯಲ್ಲಿ ಐದು ದಿನಗಳ ಕಾಲ ನಡೆದ ಏರೋ ಇಂಡಿಯಾ 2025 ಅತ್ಯಂತ ಯಶಸ್ವಿಯಾಗಿತ್ತು. ಅಮೆರಿಕಾ, ಬ್ರಿಟನ್, ಫ್ರಾನ್ಸ್ ಸೇರಿದಂತೆ ದೇಶ–ವಿದೇಶಗಳ ಯುದ್ಧ ವಿಮಾನಗಳು ವೈಮಾನಿಕ ಪ್ರದರ್ಶನ ನಡೆಸಿದ್ದವು. ಜೊತೆಗೆ ಹಲವಾರು ರಾಷ್ಟಗಳ ಜೊತೆ ರಕ್ಷಣಾ ಒಪ್ಪಂದಗಳಿಗೂ ಸಹಿ ಹಾಕಲಾಗಿತ್ತು. ಅಲ್ಲದೇ, ಆತ್ಮನಿರ್ಭರ ಭಾರತದ ರಕ್ಷಣಾ ಉತ್ಪನ್ನಗಳಿಗೂ ವೇದಿಕೆ ಒದಗಿಸಿತ್ತು.

***************

ಬೆಲೆ ಏರಿಕೆ ಆರ್ಥಿಕ ದುಸ್ಥಿತಿಯಿಂದ ರಾಜ್ಯ ಸರ್ಕಾರ ದಿವಾಳಿ ಅಂಚೆಗೆ ತಲುಪಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಆಸ್ತಿ ನೋಂದಣಿ ಶುಲ್ಕ, ಆಸ್ಪತ್ರೆ ಸೇವಾ ಶುಲ್ಕ, ನೀರಿನ ಸುಂಕ, ಆಸ್ತಿ ತೆರಿಗೆ ಸೇರಿದಂತೆ ಎಲ್ಲಾ ತೆರಿಗೆಯನ್ನು ಸರ್ಕಾರ ಏರಿಸಿದ್ದು, ಜನರು ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದಾರೆ.

ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಗೆ ರಾಜ್ಯ ಸರ್ಕಾರ 7 ಸಾವಿರ ಕೋಟಿ ರೂಪಾಯಿ ಬಾಕಿ ನೀಡಬೇಕಿದ್ದು, ಸಂಸ್ಥೆ ಮುಚ್ಚುವ ಸ್ಥಿತಿಗೆ ತಲುಪಿದೆ ಎಂದು ದೂರಿದ್ದಾರೆ.

***************

ಮಲಪ್ರಭಾ ಜಲಾಶಯದಿಂದ ಕಾಲುವೆಗಳಿಗೆ ಹರಿಬಿಡಲಾಗಿರುವ ನೀರನ್ನು ಇದೇ 15 ರಿಂದ ಸ್ಥಗಿತಗೊಳಿಸುವ ನಿರ್ಧಾರ ಕೈಬಿಟ್ಟು ಮಾರ್ಚ್ 1ರವರೆಗೂ ನೀರು ಬಿಡುವಂತೆ 'ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷೆ ಹಾಗೂ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಆದೇಶಿಸಿದ್ದಾರೆ.

ಮಲಪ್ರಭಾ ಜಲಾಶಯದಿಂದ ನೀರಾವರಿಗಾಗಿ ಒಳಪಡುವ ಕಾಲುವೆಗಳ ಮುಖಾಂತರ ಇದೇ 14ರ ವರೆಗೆ 16 ಟಿಎಂಸಿ ನೀರನ್ನು ನೀರಾವರಿ ಉದ್ದೇಶಕ್ಕೆ ರೈತರಿಗೆ ಬಿಡುಗಡೆ ಮಾಡಲಾಗಿದೆ. ರೈತರ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಮಾರ್ಚ್ 1ರ ವರೆಗೆ ನೀರಾವರಿ ಕಾಲುವೆಗಳ ಮುಖಾಂತರ ಹರಿಸುವುದನ್ನು ಮುಂದುವರೆಸಲಾಗುವುದು ಎಂದು ತಿಳಿಸಿದ್ದಾರೆ.

ಕುಡಿಯುವ ನೀರಿಗಾಗಿ ಜೂನ್ ಅಂತ್ಯದವರೆಗೆ 15 ಟಿ.ಎಂ.ಸಿ ನೀರನ್ನು ಕಾಯ್ದಿರಿಸಿ ಒದಗಿಸಲು ಇದೇ ವೇಳೆ ಸಚಿವರು ಸೂಚಿಸಿದ್ದಾರೆ.

***************

ವಿಧಾನಸೌಧದ ಆವರಣದಲ್ಲಿರುವ ನಾಡದೇವಿ ಭುವನೇಶ್ವರಿ ಪ್ರತಿಮೆ ಮುಂಭಾಗದಲ್ಲಿ ಕವಿ ಚಕ್ರವರ್ತಿ ರನ್ನ ವೈಭವದ 'ರನ್ನರಥ'ಕ್ಕೆ ಅಬಕಾರಿ ಮತ್ತು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಇಂದು ಚಾಲನೆ ನೀಡಿದ್ದಾರೆ.

ಇದೇ 22, 23 ಹಾಗೂ 24 ರಂದು ಮುಧೋಳ ಹಾಗೂ ಬೆಳಗಾವಿಯಲ್ಲಿ ಕವಿ ಚಕ್ರವರ್ತಿ ರನ್ನ ವೈಭವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ರನ್ನ ವೈಭವ 2025 ಸಾಂಸ್ಕೃತಿಕ ಉತ್ಸವದ ಅಂಗವಾಗಿ ರನ್ನರಥಕ್ಕೆ ಚಾಲನೆ ನೀಡಲಾಯಿತು.

***************

ರೈತರು ಹಾಗೂ ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸುವುದು ಹಾಗೂ ಕಚೇರಿಗಳಿಗೆ ಅಲೆದಾಟ ತಪ್ಪಿಸುವ ನಿಟ್ಟಿನಲ್ಲಿ ಕಡ್ಡಾಯವಾಗಿ ಇ-ಆಫೀಸ್ ಅನುಷ್ಠಾನ ಮಾಡುವಂತೆ ಇಂಧನ ಸಚಿವ ಕೆ.ಜೆ. ಜಾರ್ಜ್ ಸೂಚನೆ ನೀಡಿದ್ದಾರೆ.

ಚಿತ್ರದುರ್ಗದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ನಡೆದ ಜನಪ್ರತಿನಿಧಿಗಳ ಸಭೆ ಯಲ್ಲಿ ಮಾತನಾಡಿದ ಅವರು, ಪ್ರಸ್ತುತ ರೈತರಿಗೆ 7 ಗಂಟೆಗಳ ವಿದ್ಯುತ್ ಪೂರೈಕೆ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆದೇಶ ನೀಡಿದ್ದಾರೆ. ಹೀಗಾಗಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲಿ 4 ಗಂಟೆ ಹಾಗೂ ರಾತ್ರಿ ಸಮಯದಲ್ಲಿ 3 ಗಂಟೆ ವಿದ್ಯುತ್ ಪೂರೈಕೆ ಮಾಡಲೇಬೇಕು ಎಂದು ಸೂಚಿಸಿದ್ದಾರೆ.

ಅವಶ್ಯಕತೆ ಇದ್ದರೆ ಹೊಸ ಸಬ್‌ಸ್ಟೇಷನ್‌ಗಳಿಗೆ ಪ್ರಸ್ತಾವ ಸಲ್ಲಿಸಿ, ವಿದ್ಯುತ್ ಪೂರೈಕೆಗೆ ಕ್ರಮವಹಿಸಬೇಕು ಎಂದು ತಿಳಿಸಿದ್ದಾರೆ.

***************

ಶಿವಮೊಗ್ಗ ಜಿಲ್ಲೆ ಸಾಗರ ಅರಣ್ಯ ವಿಭಾಗದ, ಬೈರಾಪುರ ಗ್ರಾಮದ ಅಂಬಲಿಗೋಳ ಜಲಾಶಯದ ಹಿನ್ನೀರಿನಲ್ಲಿ 7 ರಿಂದ 8 ವರ್ಷದ ಗಂಡು ಹುಲಿಯ ಮೃತದೇಹ ಪತ್ತೆಯಾಗಿದೆ. ಈ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸಲು ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಮುಖ್ಯ ವನ್ಯ ಜೀವಿ ಪರಿಪಾಲಕರಿಗೆ ಸೂಚನೆ ನೀಡಿರುವ ಸಚಿವರು, 10 ದಿನಗಳ ಒಳಗಾಗಿ ವರದಿ ಸಲ್ಲಿಸಲು ತಿಳಿಸಿದ್ದಾರೆ.

***************

ಕಬ್ಬು ಸರಬರಾಜು ಮಾಡಿದ 14 ದಿನದೊಳಗಾಗಿ ರೈತರಿಗೆ ಸ್ಪಂದಿಸಿ ಸಕ್ಕರೆ ಕಾರ್ಖಾನೆಗಳು ಹಣ ಪಾವತಿಸಬೇಕು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಸೂಚಿಸಿದ್ದಾರೆ. ಇಂದು ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಹಾಗೂ ರೈತರ ಸಭೆ ನಡೆಸಿ ಮಾತನಾಡಿದ ಅವರು, ವಿಳಂಬ ನೀತಿ ಅನುಸರಿಸಿದರೆ, ಮುಂದಿನ ದಿನಗಳಲ್ಲಿ ಕಾನೂನು ರೀತಿಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದ್ದಾರೆ.

ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆ 29 ಕೋಟಿ ರೂಪಾಯಿ ಹಣ ರೈತರಿಗೆ ಪಾವತಿಸುವುದು ಬಾಕಿ ಇದೆ. ಪ್ರತಿ ವಾರ 4 ರಿಂದ 5 ಕೋಟಿ ರೂಪಾಯಿ ಹಣ ಪಾವತಿಸಬೇಕು. ಮುಂದಿನ ತಿಂಗಳ 15ರ ನಂತರ ಬಾಕಿ ಇದ್ದರೆ ಬಡ್ಡಿ ಸಮೇತ ವಸೂಲಿ ಮಾಡಿ ರೈತರಿಗೆ ನೀಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಕೊಪ್ಪ ಸಕ್ಕರೆ ಕಾರ್ಖಾನೆ ಬಾಕಿ ಇರುವ 7 ಕೋಟಿ ರೂಪಾಯಿ ಹಣವನ್ನು ಫೆಬ್ರವರಿ ಅಂತ್ಯದೊಳಗೆ ಪಾವತಿಸುವಂತೆ ಸೂಚನೆ ನೀಡಿದ್ದಾರೆ.

ಮುಂದಿನ ದಿನಗಳಲ್ಲಿ ಸಭೆ ನಡೆಸಿ ಎಲ್ಲಾ ಸಕ್ಕರೆ ಕಾರ್ಖಾನೆಗಳಲ್ಲಿ ಏಕರೂಪ ದರ ನಿಗದಿಪಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಗೃಹಲಕ್ಷ್ಮೀ, ಅನ್ನಭಾಗ್ಯ, ಹಣ ತಿಂಗಳ ವೇತನ ಅಲ್ಲ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿಕೆ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಮಾಧ್ಯಮದಲ್ಲಿ ಪ್ರಸ್ತಾಪ ಮಾಡಿರುವ ಅವರು, ಇದು ಮತದಾರರಿಗೆ ನೀವು ನೀಡುವ ಗೌರವವೇ ಎಂದು ಪ್ರಶ್ನಿಸಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿ, ಈಗ ಮತದಾರರ ಬಗ್ಗೆ ಅಗೌರವವಾಗಿ ಮಾತನಾಡುವುದು ಸರಿಯಲ್ಲ ಎಂದು ತಿಳಿಸಿದ್ದಾರೆ.

***************

ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿಗೆ ಅನೇಕ ಕುಟುಂಬಗಳು ಸಂಕಷ್ಟದಲ್ಲಿ ಸಿಲುಕಿಕೊಂಡಿದ್ದು, ಇದಕ್ಕೆ ಪರಿಹಾರ ನೀಡುವ ಸಲುವಾಗಿ ರಾಜ್ಯ ಸರ್ಕಾರ ಮಹತ್ವದ ಅಧ್ಯಾದೇಶ ಜಾರಿಗೊಳಿಸಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದ್ದಾರೆ. .

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಆಧ್ಯಾದೇಶವು ಜಾರಿಯಾದ 30 ದಿನಗಳ ಒಳಗೆ ಸಣ್ಣ ಹಣಕಾಸು ಸಂಸ್ಥೆಗಳು ಹಾಗೂ ಲೇವಾದೇವಿ ಸಂಸ್ಥೆಗಳು ಕಡ್ಡಾಯವಾಗಿ ನೊಂದಣಿ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ.

ಧ್ವನಿ– ಜಿಲ್ಲಾಧಿಕಾರಿ, ಡಾ.ಎಂ.ಆರ್.ರವಿ

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಮಾತನಾಡಿ, ಸಣ್ಣ ಹಣಕಾಸು ಸಂಸ್ಥೆಗಳು ನೋಂದಣಿ ಮಾಡಿಕೊಳ್ಳದೆ ಅಕ್ರಮವಾಗಿ ನಡೆಸುತ್ತಿರುವುದು ಗಮನಕ್ಕೆ ಬಂದರೆ, ಅಂತಹ ಪ್ರಕರಣಗಳನ್ನು ಸ್ವಯಂ ಪ್ರೇರಿತ ದೂರು ದಾಖಲಿಸಿ ಹತ್ತು ವರ್ಷಗಳ ಜೈಲು ಶಿಕ್ಷೆ ಮತ್ತು ಐದು ಲಕ್ಷ ರೂಪಾಯಿ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಸಾರ್ವಜನಿಕರು ಸಹಾಯವಾಣಿ ಸಂಖ್ಯೆ 112ಕ್ಕೆ ಕರೆ ಮಾಡಿ ತಮ್ಮ ದೂರನ್ನು ಸಲ್ಲಿಸಬಹುದು ಎಂದು ತಿಳಿಸಿದ್ದಾರೆ.

********ಮುಕ್ತಾಯ*******